# ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ

**ದಿನಾಂಕ: 07–05–2018**

## ಪತ್ರಿಕಾ ಪ್ರಕಟಣೆಗಾಗಿ

ವಿಜಯಪುರ: ಆಧುನಿಕ ಯುಗದಲ್ಲಿ ಪ್ರತಿಯೊಬ್ಬರ ಬದುಕಿನಲ್ಲಿಯೂ ಸವಾಲುಗಳು ಎದುರಾಗುತ್ತವೆ. ಅವುಗಳನ್ನು ಸಕಾರಾತ್ಮಕವಾಗಿ ಸ್ವೀಕರಿಸಿ ಹೋರಾಡಿದಾಗ ಮಾತ್ರ ಜೀವನ ಸುಂದರವಾಗುತ್ತದೆ ಎಂದು ಬೆಂಗಳೂರಿನ ಸುಧಾ ವಾರಪತ್ರಿಕೆಯ ಹಿರಿಯ ಪತ್ರಕರ್ತ ದಿಲಾವರ ರಾಮದುರ್ಗ ಅಭಿಪ್ರಾಯಪಟ್ಟರು.

ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಜ್ಞಾನಶಕ್ತಿ ಆವರಣದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಘಟಕ ಹಾಗೂ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವತಿಯಿಂದ ಸೋಮವಾರ ಹಮ್ಮಿಕೊಂಡಿದ್ದ ಮುದ್ರಣ ವಿನ್ಯಾಸ ಮತ್ತು ಕಲಾಕೃತಿ ಕುರಿತ 10 ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಸ್ತುತ ದಿನಗಳಲ್ಲಿ ತೀವ್ರವಾದ ಬಂಡವಾಳಶಾಹಿಯು ನಮ್ಮ ದೇಶವನ್ನು ಆಳಲು ಶುರುಮಾಡಿದೆ. ಇದರೊಂದಿಗೆ ತೀವ್ರವಾದ ಮತಾಂಧತೆಯೂ ಸೇರಿಕೊಂಡಿದೆ. ಇದೇ ರೀತಿ ಮುಂದುವರೆದಲ್ಲಿ ದೇಶವು ಬಂಡವಾಳಶಾಹಿ ಮತ್ತು ಮತಾಂಧತೆಗೆ ಬಲಿಯಾಗುವುದರಲ್ಲಿ ಸಂದೇಹವೇ ಇಲ್ಲ ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಸಮಾಜದಲ್ಲಿ ಬೇರೂರಿರುವ ಅಸಮಾನತೆಯ ವಿರುದ್ಧ ಹೋರಾಡುವ ಮನೋಭಾವನೆಯನ್ನು ಬೆಳೆಸಿಕೊಂಡಾಗ ಮಾತ್ರ ಆರೋಗ್ಯಕರ ಸಮಾಜವನ್ನು ನಿರ್ಮಾಣ ಮಾಡಲು ಸಾಧ್ಯ ಎಂದು ವಿದ್ಯಾರ್ಥಿನಿಯರಿಗೆ ಕಿವಿಮಾತು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಿಳಾ ವಿವಿ ಮೌಲ್ಯಮಾಪನ ಕುಲಸಚಿವ ಪ್ರೊ.ಎಸ್.ಬಿ.ಮಾಡಗಿ ಮಾತನಾಡಿ, ಉನ್ನತ ಶಿಕ್ಷಣವು ಕೇವಲ ಒಂದು ಪದವಿಯಾಗದೇ ತರಬೇತಿ ಆಗಬೇಕು. ಅಂದಾಗ ಮಾತ್ರ ವಿದ್ಯಾರ್ಥಿಗಳು ತಮ್ಮಲ್ಲಿರುವ ಜ್ಞಾನವನ್ನು ವಿಸ್ತರಿಸಿ ಅದನ್ನು ಬಳಸಿಕೊಳ್ಳುವ ಕೌಶಲ್ಯವನ್ನು ಬೆಳೆಸಿಕೊಳ್ಳಬಹುದು ಎಂದರು.

ಈ ಸಂದರ್ಭದಲ್ಲಿ ಬೆಂಗಳೂರಿನ ಕಲಾವಿದ ವಿಷ್ಣುಕುಮಾರ ಮಾತನಾಡಿದರು. ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವಿದ್ಯಾರ್ಥಿನಿಯರು ಹೊರತಂದ ಮಹಿಳಾ ಧ್ವನಿ ವಿಶೇಷ ಸಂಚಿಕೆಯನ್ನು ಬಿಡುಗಡೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಪತ್ರಿಕೋದ್ಯಮ ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ಪ.ಜಾ./ಪ.ಪಂ. ಘಟಕದ ನಿರ್ದೇಶಕ ಡಾ.ಸಕ್ಪಾಲ ಹೂವಣ್ಣ ಸ್ವಾಗತಿಸಿ, ಪ್ರಾಸ್ತಾವಿಕ ನುಡಿಗಳನ್ನಾಡಿದರು. ಸಂಶೋದನಾ ವಿದ್ಯಾರ್ಥಿನಿ ಸುವರ್ಣ ಕಂಬಿ ನಿರೂಪಿದರು. ಯುಜಿಸಿ ಪೋಸ್ಟ್ ಡಾಕ್ಟರಲ್ ಫೆಲೋ ಡಾ.ತಹಮಿನಾ ಕೋಲ್ಹಾರ ವಂದಿಸಿದರು.

**ಫೋಟೋ ಕ್ಯಾಪ್ಷೆನ್:**

1) ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಜ್ಞಾನಶಕ್ತಿ ಆವರಣದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಘಟಕ ಹಾಗೂ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವತಿಯಿಂದ ಸೋಮವಾರ ಹಮ್ಮಿಕೊಂಡಿದ್ದ ಮುದ್ರಣ ವಿನ್ಯಾಸ ಮತ್ತು ಕಲಾಕೃತಿ ಕುರಿತ 10 ದಿನದ ಕಾರ್ಯಾಗಾರವನ್ನು ಬೆಂಗಳೂರಿನ ಸುಧಾ ವಾರಪತ್ರಿಕೆಯ ಹಿರಿಯ ಪತ್ರಕರ್ತ ದಿಲಾವರ ರಾಮದುರ್ಗ ಉದ್ಘಾಟಿಸಿದರು.

2) ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಜ್ಞಾನಶಕ್ತಿ ಆವರಣದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಘಟಕ ಹಾಗೂ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವತಿಯಿಂದ ಸೋಮವಾರ ಹಮ್ಮಿಕೊಂಡಿದ್ದ ಮುದ್ರಣ ವಿನ್ಯಾಸ ಮತ್ತು ಕಲಾಕೃತಿ ಕುರಿತ 10 ದಿನದ ಕಾರ್ಯಾಗಾರವನ್ನು ಬೆಂಗಳೂರಿನ ಸುಧಾ ವಾರಪತ್ರಿಕೆಯ ಹಿರಿಯ ಪತ್ರಕರ್ತ ದಿಲಾವರ ರಾಮದುರ್ಗ ಉದ್ಘಾಟಿಸಿ ಮಾತನಾಡಿದರು.

3) ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಜ್ಞಾನಶಕ್ತಿ ಆವರಣದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಘಟಕ ಹಾಗೂ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವತಿಯಿಂದ ಸೋಮವಾರ ಹಮ್ಮಿಕೊಂಡಿದ್ದ ಮುದ್ರಣ ವಿನ್ಯಾಸ ಮತ್ತು ಕಲಾಕೃತಿ ಕುರಿತ 10 ದಿನದ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿದ್ದ ಮಹಿಳಾ ವಿವಿ ಮೌಲ್ಯಮಾಪನ ಕುಲಸಚಿವ ಪ್ರೊ.ಎಸ್.ಬಿ.ಮಾಡಗಿ ಮಾತನಾಡಿದರು.


PRINT DESIGN / ART WORK
DAYS WORKSHOP


AKKAMAHADEVI WOMEN'S UNIVERSITY, VIJAYAPURA
SC/ ST CELL &
DEPARTMENT OF JOURNALISM & MASS COMMUNICATION
PRINT DESIGN / ART WORK
TEN DAYS WORKSHOP
Prof.Sabiha Bhumigowda
Shri Dilawar Ramadurg
Shri Vishnukumar
Shri Naveen kumar
Prof.L.R.Nayak
JMC COMPUTER LAB
7th May, 2018 to 16th May 2018
DR.SAKPAL HOOVANNA